# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **792** |
| ಸದಸ್ಯರ ಹೆಸರು | : | **ಶ್ರೀ. ಡಿ.ಎಸ್.ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| ಉತ್ತರಿಸುವ ದಿನಾಂಕ | : | **23/07/2024** |
| ಉತ್ತರಿಸುವ ಸಚಿವರು | : | **ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು** |

| | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಎಲ್ಲಾ ಜಿಲ್ಲೆಗಳ ವಾರ್ಡ್‌ಗಳನ್ನು ಹೆಚ್ಚಿಸಲು ಸರ್ಕಾರದ ಮುಂದಿರುವ ಮಾನದಂಡಗಳೇನು (ಬೆಂಗಳೂರು ಹೊರತುಪಡಿಸಿ ವಿವರ ನೀಡುವುದು); | ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್–11, 13, 352 ಮತ್ತು ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ಸೆಕ್ಷನ್–7 ರನ್ವಯ, ಜೊತೆಗೆ ಸರ್ಕಾರದ ಆದೇಶ ಸಂಖ್ಯೆ:UDD 4 MLR 2014; ದಿನಾಂಕ:15/02/2014 ರಲ್ಲಿ ನಿಗದಿಪಡಿಸಿರುವ ಮಾನದಂಡಗಳನ್ವಯ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮತ್ತು ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ವಾರ್ಡುಗಳನ್ನು ಗುರುತಿಸಲು (ಜಿಲ್ಲಾಧಿಕಾರಿಗಳ ಹಂತದಲ್ಲಿ) ಕ್ರಮವಹಿಸಲಾಗುತ್ತದೆ. ಸದರಿ ವಾರ್ಡುಗಳನ್ನು ನಿಯಮಾನುಸಾರ ಪರಿಶೀಲಿಸಿ, ನಿರ್ಧರಿಸುತ್ತಿದ್ದು, ಇದಕ್ಕೆ 2011 ರ ಜನಸಂಖ್ಯೆಯ ದತ್ತಾಂಶವು ಆಧಾರವಾಗಿರುತ್ತದೆ.<br><br>ಶಿವಮೊಗ್ಗ ನಗರವನ್ನೂ ಒಳಗೊಂಡಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು, ಮಹಾನಗರ ಪಾಲಿಕೆಗಳಲ್ಲಿ ಜನಸಂಖ್ಯೆಯನ್ನು ಆಧರಿಸಿ, ನಿಯಮಾನುಸಾರ ವಾರ್ಡುಗಳನ್ನು ಗುರುತಿಸುವುದರಿಂದ ವಾರ್ಡುಗಳನ್ನು ಹೆಚ್ಚಿಸುವ ಅಗತ್ಯವಿರುವುದಿಲ್ಲ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಅಧಿಕಾರಿ/ನೌಕರರು ಮತ್ತು ಜನಪ್ರತಿನಿಧಿಗಳ ಉಸ್ತುವಾರಿಯಲ್ಲಿ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವುದರಿಂದ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ತೊಂದರೆ ಉಂಟಾಗಿರುವುದಿಲ್ಲ. |
| ಆ | ಜಿಲ್ಲಾ ಕೇಂದ್ರಗಳಲ್ಲಿ ವ್ಯಾಪ್ತಿ ಮೀರಿ ಬಡಾವಣೆಗಳು ನಿರ್ಮಾಣವಾಗಿದ್ದು, ಜನಸಂಖ್ಯೆಗೆ ಅನುಗುಣವಾಗಿ ವಾರ್ಡ್‌ಗಳನ್ನು ಹೆಚ್ಚಿಸಲು ಸರ್ಕಾರದ ಮುಂದಿರುವ ಸವಾಲುಗಳೇನು; | |
| ಇ | ಶಿವಮೊಗ್ಗ ನಗರ ದಿನೇದಿನೇ ವೇಗವಾಗಿ ಬೆಳೆಯುತ್ತಿದ್ದು ಹೆಚ್ಚಿನ ಬಡಾವಣೆಗಳು ನಿರ್ಮಾಣವಾಗಿ, ನಗರದಲ್ಲಿ ಜನಸಂಖ್ಯೆ ಹೆಚ್ಚುತ್ತಿರುವುದರಿಂದ, ಜನರಿಗೆ ಮೂಲಭೂತ ಸೌಲಭ್ಯಕ್ಕೆ ತೊಂದರೆ ಆಗದಂತೆ ವಾರ್ಡ್ಗಳನ್ನು ಹೆಚ್ಚಿಸಲು ಸರ್ಕಾರಕ್ಕೆ ಬೇಡಿಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಕೈಗೊಳ್ಳಲಾದ ಕ್ರಮಗಳೇನು? | |

**ಸಂಖ್ಯೆ:ನಅಇ 50 ಎಲ್‌ಸಿಕ್ಯೂ 2024.**

(ಸುರೇಶ್ ಬಿ.ಎಸ್)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು